**Akashvani : Bangalore**
**National Bulletin In Kannada**
**16.06.2024 / 7.35 am**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**16.06.2024 / 7.35 am**

**<><*<><>*><>**

<u>ಮುಖ್ಯಾಂಶಗಳು</u>

೧. ಜಮ್ಮು -ಕಾಶ್ಮೀರದ ಭದ್ರತಾ ಪರಿಸ್ಥಿತಿ ಹಾಗೂ ಅಮರ್‌ನಾಥ್ ಯಾತ್ರೆ ಸಿದ್ಧತೆ ಬಗ್ಗೆ ಅಮಿತ್ ಶಾ ಇಂದು ಉನ್ನತ ಮಟ್ಟದ ಸಭೆ

೨. ವಂದೇ ಭಾರತ್ ಸ್ಲೀಪರ್ ಕ್ಲಾಸ್ ರೈಲಿನ ಪ್ರಾಯೋಗಿಕ ಸಂಚಾರ ಇನ್ನೆರಡು ತಿಂಗಳಲ್ಲಿ ಆರಂಭ

೩. ಪಿಎಂ ಕಿಸಾನ್ ನಿಧಿ ಯೋಜನೆ; ೯ ಕೋಟಿ ೩ ಲಕ್ಷ ರೈತರ ಖಾತೆಗಳಿಗೆ ಬರುವ ಮಂಗಳವಾರ ೨೦ ಸಾವಿರ ಕೋಟಿ ರೂಪಾಯಿ ಹಣ ವರ್ಗಾವಣೆ

೪. ಐಸಿಸಿ ಟಿ-೨೦ ವಿಶ್ವಕಪ್ ಕ್ರಿಕೆಟ್; ಪಾಕಿಸ್ತಾನ- ಐರ್ಲೆಂಡ್ ತಂಡಗಳು ಮುಖಾಮುಖಿ

**<><*<><>*><>**

ಕೇಂದ್ರ ಗೃಹ ಸಚಿವ ಅಮಿತ್ ಶಾ, ಜಮ್ಮು ಮತ್ತು ಕಾಶ್ಮೀರದ ಭದ್ರತಾ ಪರಿಸ್ಥಿತಿ ಪರಿಶೀಲನೆ ಹಾಗೂ ಅಮರ್‌ನಾಥ್ ಯಾತ್ರೆ ಸಿದ್ಧತೆ ಬಗ್ಗೆ ಇಂದು ಉನ್ನತ ಮಟ್ಟದ ಸಭೆ ನಡೆಸಲಿದ್ದಾರೆ. ಜಮ್ಮು-ಕಾಶ್ಮೀರದ ಲೆಫ್ಟಿನೆಂಟ್ ಗವರ್ನರ್ ಮನೋಜ್ ಸಿನ್ಹಾ, ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್, ಕೇಂದ್ರ ಗೃಹ ಕಾರ್ಯದರ್ಶಿ, ಸೇನೆ, ಪೊಲೀಸ್ ಹಾಗೂ ಜಮ್ಮು-ಕಾಶ್ಮೀರದ ಹಿರಿಯ ಆಡಳಿತಗಾರರು ಇದರಲ್ಲಿ ಪಾಲ್ಗೊಳ್ಳಲಿದ್ದಾರೆ.

**<><*<><>*><>**

ಜಮ್ಮು ಮತ್ತು ಕಾಶ್ಮೀರದಲ್ಲಿ ಲೆಫ್ಟಿನೆಂಟ್ ಗವರ್ನರ್ ಮನೋಜ್ ಸಿನ್ಹಾ, ಭಯೋತ್ಪಾದಕ ಪರಿಸರ ವ್ಯವಸ್ಥೆಯನ್ನು ತಟಸ್ಥಗೊಳಿಸಲು ಭದ್ರತಾ ಏಜೆನ್ಸಿಗಳೊಂದಿಗೆ ನಿಕಟ ಸಮನ್ವಯದಿಂದ ಕೆಲಸ ಮಾಡಲು ನಾಗರಿಕ ಮತ್ತು ಪೊಲೀಸ್ ಆಡಳಿತಕ್ಕೆ ನಿರ್ದೇಶನ ನೀಡಿದ್ದಾರೆ. ಭಯೋತ್ಪಾದಕರು ಮತ್ತು ಅವರ ಕಾರ್ಯ ಚಟುವಟಿಕೆಗಳಿಗೆ ಮಾಡುವವರ ವಿರುದ್ಧ ಕಠಿಣಕ್ರಮ ಕೈಗೊಳ್ಳಬೇಕು ಎಂದು ಅವರು ಹೇಳಿದರು. ಶ್ರೀನಗರದಲ್ಲಿ ಭದ್ರತಾ ಪರಿಸ್ಥಿತಿ ಕುರಿತು ಉನ್ನತ ಮಟ್ಟದ ಸಭೆಯ ಅಧ್ಯಕ್ಷತೆ ವಹಿಸಿದ ಲೆಫ್ಟಿನೆಂಟ್ ಗವರ್ನರ್ ಈ ವಿಷಯ ತಿಳಿಸಿದರು. ಅಮರನಾಥ ಯಾತ್ರೆ, ಯೋಗ ದಿವಸ್ ಮತ್ತು ಈದ್-ಉಲ್-ಅಧಾ ಆಚರಣೆಗಳ ಪೂರ್ವಭಾವಿಯಾಗಿ ಜಿಲ್ಲೆಗಳು ಮತ್ತು ಪೊಲೀಸ್ ಆಡಳಿತವು ಕೈಗೊಂಡಿರುವ ಸಿದ್ಧತೆಗಳ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು.

**<><*<><>*><>**

ವಂದೇ ಭಾರತ್ ಸ್ಲೀಪರ್ ಕ್ಲಾಸ್ ರೈಲಿನ ಪ್ರಾಯೋಗಿಕ ಸಂಚಾರ ಇನ್ನೆರಡು ತಿಂಗಳಲ್ಲಿ ಆರಂಭವಾಗಲಿದೆ. ವಂದೇ ಭಾರತ್ ಸ್ಲೀಪರ್ ರೈಲು ಸಂಚಾರಕ್ಕೆ ಜನರಿಂದ ಬೇಡಿಕೆ ಇದೆ ಎಂದು ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ನವದೆಹಲಿಯಲ್ಲಿ ಹೇಳಿದ್ದಾರೆ. ವಂದೇ ಭಾರತ್ ರೈಲು ಮೊದಲ ಸ್ವದೇಶಿ ಅರೆ ವೇಗದ ರೈಲು ಆಗಿದ್ದು, ಮುಂದಿನ ಐದು ವರ್ಷಗಳಲ್ಲಿ ಸರ್ಕಾರವು ಮೂಲಸೌಕರ್ಯ ಅಭಿವೃದ್ಧಿ ಮತ್ತು ಪ್ರಯಾಣಿಕರಿಗೆ ಆರಾಮದಾಯಕ ಪ್ರಯಾಣವನ್ನು ಒದಗಿಸುವತ್ತ ಹೆಚ್ಚಿನ ಗಮನ ಹರಿಸಲಿದೆ ಎಂದು ಸಚಿವರು ಹೇಳಿದರು. ಕಳೆದ ಹತ್ತು ವರ್ಷಗಳಲ್ಲಿ ೩೫ ಸಾವಿರ ಕಿಲೋಮೀಟರ್ ರೈಲು ಹಳಿಗಳನ್ನು ನಿರ್ಮಿಸಲಾಗಿದೆ ಎಂದರು. ಜನ ಸಾಮಾನ್ಯರಿಗೆ ಆರಾಮದಾಯಕ ಪ್ರಯಾಣವನ್ನು ಒದಗಿಸುವತ್ತ ಸರ್ಕಾರ ಗಮನಹರಿಸುತ್ತಿದೆ ಎಂದು ಸಚಿವರು ಪುನರುಚ್ಚರಿಸಿದರು. ಬೇಸಿಗೆಯಲ್ಲಿ ಪ್ರಯಾಣಿಕರ ಹೆಚ್ಚುವರಿ ಪ್ರಯಾಣಕ್ಕಾಗಿ, ಭಾರತೀಯ ರೈಲ್ವೇ ಸುಮಾರು ೨೦ ಸಾವಿರ ವಿಶೇಷ ರೈಲುಗಳನ್ನು ನಿರ್ವಹಿಸಿದ್ದು, ಇದರಲ್ಲಿ ಸುಮಾರು ನಾಲ್ಕು ಕೋಟಿ ಪ್ರಯಾಣಿಕರು ಪ್ರಯಾಣಿಸಿದ್ದಾರೆ.

<><*<><>*><>

ಪ್ರಧಾನಮಂತ್ರಿ ನರೇಂದ್ರ ಮೋದಿಯವರು ಬರುವ ಮಂಗಳವಾರ ೧೮ ರಂದು 'ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ನಿಧಿ' ಯೋಜನೆಯಡಿ ೯ ಕೋಟಿ ೩ ಲಕ್ಷ ರೈತರ ಖಾತೆಗೆ ೨೦ ಸಾವಿರ ಕೋಟಿ ರೂಪಾಯಿ ಹಣವನ್ನು ವರ್ಗಾವಣೆ ಮಾಡಲಿದ್ದಾರೆ. ಕೇಂದ್ರ ಗ್ರಾಮೀಣಾಭಿವೃದ್ಧಿ, ಕೃಷಿ ಹಾಗೂ ರೈತ ಕಲ್ಯಾಣ ಖಾತೆ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಈ ವಿಷಯ ಪ್ರಕಟಿಸಿದ್ದಾರೆ. ದೆಹಲಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ ಅವರು, ಕಳೆದ ಹತ್ತು ವರ್ಷಗಳಲ್ಲಿ ೧೧ ಕೋಟಿ ರೈತರ ಖಾತೆಗಳಿಗೆ ೩ ಲಕ್ಷ ಕೋಟಿ ರೂಪಾಯಿಗಳನ್ನು ಯೋಜನೆಯಡಿ ವರ್ಗಾಯಿಸಲಾಗಿದೆ ಎಂದು ಹೇಳಿದರು. ಜೂನ್ ೧೮ ರಂದು ವಾರಾಣಸಿಯಲ್ಲಿ ನಡೆಯಲಿರುವ ಪ್ರಧಾನಿಮಂತ್ರಿಯವರ ಈ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವಂತೆ ಎಲ್ಲ ಮುಖ್ಯಮಂತ್ರಿಗಳಿಗೆ ಪತ್ರ ಬರೆದಿರುವುದಾಗಿ ಅವರು ತಿಳಿಸಿದರು. ರೈತರ ಕಲ್ಯಾಣ ವಿಷಯಕ್ಕೆ ಸಂಬಂಧಿಸಿದ ಎಲ್ಲ ವಿಚಾರಗಳ ಬಗ್ಗೆ ಅಧಿಕಾರಗಳೊಂದಿಗೆ ಚರ್ಚೆ ನಡೆಸಿರುವುದಾಗಿ ತಿಳಿಸಿದ ಅವರು, ಸರ್ಕಾರದ ೧೦೦ ದಿನಗಳ ಕಾರ್ಯ ಯೋಜನೆಯ ಬಗ್ಗೆ ಪರಿಶೀಲನೆ ನಡೆಸಿದ್ದಾಗಿ ಹೇಳಿದರು.

<><*<><>*><>

ಮಧ್ಯಪ್ರದೇಶದ ಮುಖ್ಯಮಂತ್ರಿ ಡಾ.ಮೋಹನ್ ಯಾದವ್ ಅವರು, ಕೇಂದ್ರ ಸಚಿವ ಜ್ಯೋತಿರಾದಿತ್ಯ ಸಿಂಧಿಯಾ ಅವರೊಂದಿಗೆ ನಿನ್ನೆ ಗ್ವಾಲಿಯರ್‌ನಲ್ಲಿ ಹೊಸದಾಗಿ ನಿರ್ಮಿಸಲಾದ ಕ್ರಿಕೆಟ್ ಕ್ರೀಡಾಂಗಣವನ್ನು ಉದ್ಘಾಟಿಸಿದರು. ಈ ಸಂದರ್ಭದಲ್ಲಿ, ಮುಖ್ಯಮಂತ್ರಿ ಯಾದವ್ ಅವರು ಹೊಸ ಕ್ರೀಡಾಂಗಣದಲ್ಲಿ ಮಧ್ಯಪ್ರದೇಶ ಕ್ರಿಕೆಟ್ ಲೀಗ್ ಉದ್ಘಾಟನಾ ಪಂದ್ಯಕ್ಕೆ ಚಾಲನೆ ನೀಡಿದರು. ಕೇಂದ್ರ ಸಚಿವ ಸಿಂಧಿಯಾ ಅವರು ಎಂಪಿಪಿಎಲ್‌ನ ಅಧ್ಯಕ್ಷರಾಗಿದ್ದಾರೆ. ಒಟ್ಟು ಐದು ತಂಡಗಳು ಗ್ವಾಲಿಯರ್ ಚೀತಾಸ್, ಮಾಲ್ವಾ ಪ್ಯಾಂಥರ್ಸ್, ಭೋಪಾಲ್ ಲೆಪರ್ಡ್, ಜಬಲ್ಪುರ್ ಲಯನ್ಸ್ ಮತ್ತು ರೇವಾ ಜಾಗ್ವಾರ್ಸ್ ಪಂದ್ಯಾವಳಿಯಲ್ಲಿ ಸ್ಪರ್ಧಿಸುತ್ತಿವೆ.

<><*<><>*><>

ಹೆಸರಾಂತ ವನ್ಯಜೀವಿ ಚಿತ್ರ ನಿರ್ಮಾಪಕ ಚೆನ್ನೈ ಸುಬ್ಬಯ್ಯ ನಲ್ಲಮುತ್ತು ಅವರಿಗೆ ಪ್ರತಿಷ್ಠಿತ ವಿ.ಶಾಂತರಾಮ್ ಜೀವಮಾನ ಸಾಧನೆ ಪ್ರಶಸ್ತಿ ಪ್ರಕಟಿಸಲಾಗಿದೆ. ಕೇಂದ್ರ ವಾರ್ತಾ ಮತ್ತು ಪ್ರಸಾರ ಖಾತೆ

ರಾಜ್ಯ ಸಚಿವ ಡಾ.ಎಲ್.ಮುರುಗನ್, ಮುಂಬೈ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವದಲ್ಲಿ ನಿನ್ನೆ ಈ ವಿಷಯ ಪ್ರಕಟಿಸಿದ್ದಾರೆ. ಸುಬ್ಬಯ್ಯ ನಲ್ಲಮುಥು ಅವರು, 'ಲಿವಿಂಗ್ ಆನ್ ದ ಎಡ್ಜ್' ವನ್ಯಜೀವಿ ಸರಣಿ ಸಂಚಿಕೆಗಳನ್ನು ನಿರ್ಮಿಸಿದ್ದಾರೆ. ಈ ಸಂದರ್ಭದಲ್ಲಿ ಆಕಾಶವಾಣಿಯೊಂದಿಗೆ ಮಾತನಾಡಿದ ಡಾ.ಎಲ್.ಮುರುಗನ್ ಅವರು, ಇದೇ ಮೊದಲ ಬಾರಿಗೆ ಈ ವರ್ಷ ಸಾಕ್ಷ್ಯ ಚಿತ್ರ ಬಜಾರ್ ಕೂಡ ವ್ಯವಸ್ಥೆ ಮಾಡಲಾಗಿದೆ ಎಂದರು. ಇದು ಚಿತ್ರ ನಿರ್ಮಾಪಕರಿಗೆ ಕೊಡು-ಕೊಳ್ಳುವವರಿಗೆ ಹಾಗೂ ಪ್ರಾಯೋಜಕರಿಗೆ ವೇದಿಕೆಯಾಗುವ ಮೂಲಕ ಚಿತ್ರ ನಿರ್ಮಾಣಕ್ಕೆ ನೆರವಾಗಲಿದೆ ಎಂದರು.

<><*<><>*><>

ಗುಜರಾತಿನ ಭುಜ್‌ನಲ್ಲಿ ನಿರ್ಮಿಸಲಾಗಿರುವ ಸ್ಮೃತಿವನ ಭೂಕಂಪ ಸ್ಮಾರಕ ಸಂಗ್ರಹಾಲಯಕ್ಕೆ ಯುನೆಸ್ಕೋದ ಪ್ರತಿಷ್ಠಿತ ಪ್ರಿಕ್ಸ್ ವರ್ಸಲಿಸ್ ಪ್ರಶಸ್ತಿ ಪ್ರಕಟಿಸಲಾಗಿದ್ದು, ಈ ಬಗ್ಗೆ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ಸಂತಸ ವ್ಯಕ್ತಪಡಿಸಿದ್ದಾರೆ. ೨೦೦೧ರಲ್ಲಿ ಸಂಭವಿಸಿದ ಭೂಕಂಪದಲ್ಲಿ ಪ್ರಾಣ ಕಳೆದುಕೊಂಡವರ ಗೌರವಾರ್ಥ ನಿರ್ಮಿಸಲಾಗಿರುವ ಈ ಸ್ಮೃತಿವನ ಮಾನವ ಧೈರ್ಯ ಶೌರ್ಯದ ಪ್ರತೀಕವಾಗಿದೆ ಎಂದು ಸಾಮಾಜಿಕ ಮಾಧ್ಯಮದಲ್ಲಿ ಪ್ರಧಾನಿ ತಿಳಿಸಿದ್ದಾರೆ.

<><*<><>*><>

ಕೇಂದ್ರ ಸಾಹಿತ್ಯ ಅಕಾಡೆಮಿ ೨೦೨೪ನೇ ಸಾಲಿನ ಬಾಲ ಸಾಹಿತ್ಯ ಪುರಸ್ಕಾರ ಹಾಗೂ ಯುವ ಪುರಸ್ಕಾರಗಳನ್ನು ಪ್ರಕಟಿಸಿದೆ.

ಬಾಲ ಸಾಹಿತ್ಯ ಪುರಸ್ಕಾರಕ್ಕೆ ಒಟ್ಟು ೨೪ ಹಾಗೂ ಯುವ ಸಾಹಿತ್ಯ ಪುರಸ್ಕಾರಕ್ಕೆ ೨೩ ಸಾಹಿತಿಗಳು ಆಯ್ಕೆಯಾಗಿದ್ದಾರೆ. ಈ ಪುರಸ್ಕಾರ ೫೦ ಸಾವಿರ ರೂಪಾಯಿ ಹಾಗೂ ಫಲಕ ಒಳಗೊಂಡಿದೆ.

<><*<><>*><>

ಮಧ್ಯಪ್ರದೇಶದಲ್ಲಿ, ಮುಕ್ತ ಜೈಲು ನಿರ್ಮಿಸುವ ಮೂಲಕ ಖೈದಿಗಳ ಪುನರ್ವಸತಿಗೆ ಸರ್ಕಾರ ಹೊಸ ಉಪಕ್ರಮವನ್ನು ಕೈಗೊಂಡಿದೆ. ಮುಖ್ಯಮಂತ್ರಿ ಡಾ.ಮೋಹನ್ ಯಾದವ್ ಅವರು ನಿನ್ನೆ ಉಜ್ಜಯಿನಿಯಲ್ಲಿ ಈ ಮುಕ್ತ ಜೈಲು ಕಾಲೋನಿ ಭೈರವಗಢವನ್ನು ಉದ್ಘಾಟಿಸಿದರು. ಭೈರವಗಢ ಮುಕ್ತ ಜೈಲಿನಲ್ಲಿ, ಶಿಕ್ಷೆಗೊಳಗಾದ ಕೈದಿಗಳು ತಮ್ಮ ಕುಟುಂಬದೊಂದಿಗೆ ವಾಸಿಸುವ ಮತ್ತು ಸಮಾಜದ ಮುಖ್ಯವಾಹಿನಿಗೆ ಸೇರುವ ಮೂಲಕ ಸಾಮಾಜಿಕ ಜೀವನವನ್ನು ನಡೆಸಲು ಸಾಧ್ಯವಾಗುತ್ತದೆ. ೩ ಕೋಟಿ ೨೫ ಲಕ್ಷ ವೆಚ್ಚದಲ್ಲಿ ರಾಜ್ಯದ ಎಂಟನೇ ಮುಕ್ತ ಕಾರಾಗೃಹ ಇದಾಗಿದ್ದು, ರಾಜ್ಯದ ಕೈದಿಗಳಿಗೆ ಸಂಪೂರ್ಣ ಮೂಲ ಸೌಕರ್ಯ ಕಲ್ಪಿಸಲು ಸರ್ಕಾರ ತೀರ್ಮಾನಿಸಿದೆ ಎಂದು ಮುಖ್ಯಮಂತ್ರಿ ಡಾ.ಮೋಹನ್ ಯಾದವ್ ಹೇಳಿದ್ದಾರೆ.

<><*<><>*><>

ಭಾರತೀಯ ಹವಾಮಾನ ಇಲಾಖೆ ಪಂಜಾಬ್, ಹರಿಯಾಣ, ಜಾರ್ಖಂಡ್, ಬಿಹಾರ, ಉತ್ತರ ಪ್ರದೇಶ ಮತ್ತು ದೆಹಲಿಯಲ್ಲಿ ಭಯಂಕರ ಬಿಸಿಗಾಳಿ ಆವರಿಸಿರುವ ಕಾರಣ ಇಂದಿನವರೆಗೂ ರೆಡ್ ಅಲರ್ಟ್ ಘೋಷಿಸಿದೆ. ಈ ಮಧ್ಯೆ, ಪಶ್ಚಿಮ ಬಂಗಾಳ ಮತ್ತು ಒಡಿಶಾದಲ್ಲಿ ಆರೆಂಜ್ ಅಲರ್ಟ್ ಘೋಷಿಸಲಾಗಿದೆ. ದೆಹಲಿಯಲ್ಲಿ ನಿನ್ನೆ ಗರಿಷ್ಠ ತಾಪಮಾನ ೪೪.೬ ಡಿಗ್ರಿ ಸೆಲ್ಸಿಯಸ್ ದಾಖಲಾಗಿದೆ, ಇದು ಸಾಮಾನ್ಯಕ್ಕಿಂತ ಆರು ಡಿಗ್ರಿ ಹೆಚ್ಚಾಗಿದೆ. ಮಾನ್ಸೂನ್‌ನಲ್ಲಿ, ಸಿಕ್ಕಿಂ ಮತ್ತು ಮೇಘಾಲಯದಲ್ಲಿ ಅಸಾಧಾರಣ ಭಾರೀ

ಮಳೆಯೊಂದಿಗೆ ಈಶಾನ್ಯದಲ್ಲಿ ಭಾರೀ ಮಳೆಯು ಮುಂದುವರೆಯಲಿದೆ ಎಂದು ಹವಾಮಾನ ಇಲಾಖೆ ಹೇಳಿದೆ.  ಇದೇ ರೀತಿಯ ಪರಿಸ್ಥಿತಿಗಳು ಮುಂದಿನ ಏಳು ದಿನಗಳವರೆಗೆ ಈ ಪ್ರದೇಶದಲ್ಲಿ ಇದೇ ಪರಿಸ್ಥಿತಿ ಮುಂದುರಿಯಲಿದೆ. ಮುಂದಿನ ಐದು ದಿನಗಳಲ್ಲಿ ದಕ್ಷಿಣ ಭಾರತದಲ್ಲಿ ಗುಡುಗು, ಮಿಂಚು ಮತ್ತು ಬಿರುಗಾಳಿ ಸಹಿತ ಮಳೆ ಮುಂದುವರಿಯುವ ಸಾಧ್ಯತೆಯಿದೆ. ಈ ತಿಂಗಳ ೧೮ ರಿಂದ ಮಧ್ಯ ಮತ್ತು ಪೂರ್ವ ಭಾರತದ ಕೆಲವು ಭಾಗಗಳಲ್ಲಿ ಮಳೆ ಪ್ರಾರಂಭವಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

**<><*<><>*><>**

ಮುಂಬೈ ೧೮ನೇ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವ ನ್ಯಾಷನಲ್ ಜಾಗ್ರಫಿಕ್‌ನ ಬಿಲ್ಲಿ ಅಂಡ್ ಮೊಲ್ಲಿ ಅನ್ ಓಟ್ಟೆರ್ ಲವ್ ಸ್ಟೋರಿ ಸಾಕ್ಷ್ಯಚಿತ್ರ ಪ್ರದರ್ಶನದೊಂದಿಗೆ ನಿನ್ನೆ ಆರಂಭವಾಯಿತು. ದೆಹಲಿ, ಚೆನ್ನೈ, ಕೊಲ್ಕತ್ತಾ, ಪುಣೆಗಳಲ್ಲಿಯೂ ಕೂಡ ಸಮಾನಂತರವಾಗಿ ಈ ಪ್ರದರ್ಶನ ನಡೆಯಿತು. ಒಟ್ಟು ೫೯ ದೇಶಗಳ ೬೧ ಭಾಷೆಗಳ ೩೧೪ ಚಿತ್ರಗಳನ್ನು ಆರು ದಿನಗಳ ಕಾಲ ನಡೆಯಲಿರುವ ಈ ಚಿತ್ರೋತ್ಸವದಲ್ಲಿ ಪ್ರದರ್ಶಿಸಲಾಗುತ್ತಿದೆ.

**<><*<><>*><>**

ನಿನ್ನೆ ರಾತ್ರಿ ಆಂಟಿಗುವಾದ ನಾರ್ತ್ ಸೌಂಡ್‌ನ ಸರ್ ವಿವಿಯನ್ ರಿಚರ್ಡ್ಸ್ ಕ್ರೀಡಾಂಗಣದಲ್ಲಿ ನಡೆದ ಐಸಿಸಿ ಪುರುಷರ ಟಿ-೨೦ ವಿಶ್ವಕಪ್ ಕ್ರಿಕೆಟ್‌ನಲ್ಲಿ ಇಂಗ್ಲೆಂಡ್, ನಮೀಬಿಯಾವನ್ನು ಡಕ್ವರ್ತ್-ಲೂಯಿಸ್-ಸ್ಟರ್ನ್ ವಿಧಾನದ ಮೂಲಕ ೪೧ ರನ್‌ಗಳಿಂದ ಸೋಲಿಸಿತು.  ೧೨೬ ರನ್‌ಗಳ ಗುರಿ ಬೆನ್ನತ್ತಿದ ನಮೀಬಿಯಾ ೧೦ ಓವರ್‌ಗಳಲ್ಲಿ ೩ ವಿಕೆಟ್ ನಷ್ಟಕ್ಕೆ ೮೪ ರನ್ ಗಳಿಸಿತು.  ಮೊದಲು ಬ್ಯಾಟಿಂಗ್ ಮಾಡಿದ ಇಂಗ್ಲೆಂಡ್, ನಿಗದಿತ ೧೦ ಓವರ್‌ಗಳಲ್ಲಿ ೧೨೨ ರನ್ ಗಳಿಸಿತು, ಆದರೆ ಮಳೆಯಿಂದಾಗಿ ಗುರಿಯನ್ನು ೧೨೬ ರನ್‌ಗಳಿಗೆ ಪರಿಷ್ಕರಿಸಲಾಯಿತು. ಲಾಡರ್‌ಹಿಲ್‌ನ ಸೆಂಟ್ರಲ್ ಬ್ರೋವರ್ಡ್ ರೀಜನಲ್ ಪಾರ್ಕ್ ಕ್ರೀಡಾಂಗಣದಲ್ಲಿ ರಾತ್ರಿ ೮ ಗಂಟಗೆ ನಡೆಯಲಿರುವ ಪಂದ್ಯದಲ್ಲಿ ಪಾಕಿಸ್ತಾನ ಹಾಗೂ ಐರ್ಲೆಂಡ್ ತಂಡಗಳು ಮುಖಾಮುಖಿಯಾಗಲಿವೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಅಪರಾಹ್ನ ೧.೧೦ ಕ್ಕೆ<><*<>**